# ಸರ್ಕಾರಿ ಪ್ರೌಢಶಾಲೆ, ಸತ್ತೇಗಾಲ, ಕೊಳ್ಳೇಗಾಲ ತಾ॥

## ಸಂಕಲನಾತ್ಮಕ ಮೌಲ್ಯಮಾಪನ ಪರೀಕ್ಷೆ – 1

**10ನೆಯ ತರಗತಿ**

**ಸಮಯ : 3 ಗಂಟೆ** | **ಪ್ರಥಮ ಭಾಷೆ ಕನ್ನಡ** | **ಅಂಕಗಳು : 100**

**I. ಈ ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ಕೊಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ: 6x1=6**

1. 'ಮಾಡಿಯಾನು' ಪದವು ಈ ಕ್ರಿಯಾರೂಪಕ್ಕೆ ಉದಾಹರಣೆಯಾಗಿದೆ;
   ಎ) ವಿಧ್ಯರ್ಥಕ ಬಿ) ಸಂಭಾವನಾರ್ಥಕ ಸಿ) ನಿಷೇಧಾರ್ಥಕ ಡಿ) ಪ್ರಶ್ನಾರ್ಥಕ
2. ಒಂದು ಪೂರ್ಣ ಕ್ರಿಯಾಪದದೊಂದಿಗೆ ಸ್ವತಂತ್ರವಾಗಿರುವ ವಾಕ್ಯವನ್ನು ಹೀಗೆನ್ನುವರು;
   ಎ) ಸಾಮಾನ್ಯ ವಾಕ್ಯ ಬಿ) ಸಂಯೋಜಿತ ವಾಕ್ಯ ಸಿ) ಮಿಶ್ರ ವಾಕ್ಯ ಡಿ) ಪ್ರಶ್ನಾರ್ಥಕ ವಾಕ್ಯ
3. 'ಬೆಟ್ಟದಾವರೆ' ಪದದಲ್ಲಿ ಆಗಿರುವ ಸಂಧಿಯಿದು;
   ಎ) ಲೋಪ ಬಿ) ಗುಣ ಸಿ) ಆದೇಶ ಡಿ) ಜಶ್ತ್ವ
4. ಇವುಗಳಲ್ಲಿ ದ್ವಿಗು ಸಮಾಸಕ್ಕೆ ಉದಾಹರಣೆಯಾದ ಪದವಿದು;
   ಎ) ಅರಮನೆ ಬಿ) ಹೆಮ್ಮರ ಸಿ) ಸಿಡಿಮದ್ದು ಡಿ) ಪಂಚೇಂದ್ರಿಯ
5. 'ಓಹೋ' ಪದವು ಈ ವ್ಯಾಕರಣಾಂಶಕ್ಕೆ ಉದಾಹರಣೆಯಾಗಿದೆ;
   ಎ) ಸಾಮಾನ್ಯಾವ್ಯಯ ಬಿ) ಭಾವಸೂಚಕಾವ್ಯಯ ಸಿ) ಕ್ರಿಯಾರ್ಥಕಾವ್ಯಯ ಡಿ) ಅನುಕರಣಾವ್ಯಯ
6. ಒಬ್ಬರು ಹೇಳಿದ ಮಾತನ್ನೇ ಯಥಾವತ್ತಾಗಿ ಬರೆಯುವಾಗ ಬಳಸುವ ಲೇಖನ ಚಿಹ್ನೆಯಿದು;
   ಎ) ವಾಕ್ಯವೇಷ್ಟನ ಬಿ) ಆವರಣ ಸಿ) ವಿವರಣ ಡಿ) ಉದ್ಧರಣ

**II. ಈ ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ: 4x1=4**

7. ರಾಮ : ಅಂಕಿತನಾಮ :: ವಿದ್ವಾಂಸ : ________
8. ಬೇಗಬೇಗ : ದ್ವಿರುಕ್ತಿ :: ಕಾಡುಮೇಡು : ________
9. ಕಿಂಕರ : ಸೇವಕ :: ಕೈಯಾನು : ________
10. ಒಳ್ : ಸಪ್ತಮಿ ವಿಭಕ್ತಿ :: ಅತ್ತಣಿಂ : ________

**III. ಈ ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ: 7x1=7**

11. ಎಣ್ಣೆ ತುಪ್ಪದ ಮಿಶ್ರಣ ಬೇಡವೆಂದು ಹೇಳಿದವರು ಯಾರು?
12. ಶಾನುಭೋಗರ 'ಬ್ರಹ್ಮಾಸ್ತ್ರ' ಯಾವುದು?
13. ನಾಲ್ವಡಿ ಕೃಷ್ಣರಾಜ ಒಡೆಯರು ಯಾವಾಗ ಪಟ್ಟಾಭಿಷಿಕ್ತರಾದರು?
14. ಇಂದಲ್ಲ–ನಾಳೆ ಫಲ ಕೊಡುವ ಅಂಶಗಳಾವುವು?
15. ಯಾವುದನ್ನು ಎಚ್ಚರದಲಿ ಮುನ್ನಡೆಸಬೇಕು?
16. ಹಕ್ಕಿಯ ಕಣ್ಣುಗಳು ಯಾವುವು?
17. ಪುಟ್ಟ ಪೋರಿ ಏನು ಮಾಡುತ್ತಿದ್ದಾಳೆ?

**IV. ಈ ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ: 10x2=20**

18. ವ್ಯಾವಹಾರಿಕ ಮತ್ತು ಗ್ರಾಂಥಿಕ ಭಾಷೆಯ ಲಕ್ಷಣಗಳೇನು?
19. ಹುಲಿಯು ಹಿಂದಿನಿಂದ ಹಾರಿ ಕೊಲ್ಲದಿರಲು ಕಾರಣಗಳೇನು?
20. ಶಾನುಭೋಗರು ಮೂರ್ಛೆಯಲ್ಲಿದ್ದಾಗ ನಡೆದ ಘಟನೆಗಳನ್ನು ವಿವರಿಸಿ:
21. ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯ ಅವರು ಏನೆಂದು ಹೇಳಿದ್ದಾರೆ?
22. ಕುಂತಿ, ಮಾದ್ರಿಯರು ಯಾರ್‍ಯಾರ ಅನುಗ್ರಹದಿಂದ ಮಕ್ಕಳನ್ನು ಪಡೆದರು?
23. ಕೃಷ್ಣನು ಕೌರವೇಂದ್ರನನ್ನು ಕೊಂದನು ಎಂದು ಕರ್ಣ ಹೇಳಲು ಕಾರಣವೇನು?
24. 'ವಸಂತ ಮುಖ ತೋರಲಿಲ್ಲ' ಕವನದಲ್ಲಿ ಪ್ರಕೃತಿಯ ಸಂಭ್ರಮ ಹೇಗೆ ವ್ಯಕ್ತವಾಗಿದೆ?
25. ಭಗತ್‌ಸಿಂಗ್ ಜಲಿಯನ್ ವಾಲಾಬಾಗ್ ಮಾರಣ ಹೋಮದಿಂದ ತೆಗೆದುಕೊಂಡ ನಿರ್ಧಾರವೇನು?
26. ಕ್ರಿಯಾ ಸ್ವಾತಂತ್ರ್ಯ ಎಂದರೇನು? ರಾಜಕೀಯ ಸ್ವಾತಂತ್ರ್ಯದ ಮಹತ್ವವೇನು?
27. ಅಂದವಾದ ಬರೆವಣಿಗೆಯ ಬಗ್ಗೆ ಗಾಂಧೀಜಿಯವರ ಅಭಿಪ್ರಾಯವೇನು?

**V. ಈ ಕೆಳಗಿನ ಕವಿಯ / ಸಾಹಿತಿಯ ಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ:**

28. ದೇವನೂರ ಮಹಾದೇವ. **2x3=6**
29. ಜಿ.ಎಸ್. ಶಿವರುದ್ರಪ್ಪ.

**VI. ಈ ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ:** **1x3=3**

30. ಏನು ಹೇಳ್ಳೈ ಕರ್ಣ ಚಿತ್ತ
ಗ್ಲಾನಿ ಯಾವುದು ಮನಕೆ ಕುಂತೀ
ಸೂನುಗಳ ಬೆಸಕೈಸಿಕೊಂಬುದು ಸೇರದೇ ನಿನಗೆ ॥

**VII. ಈ ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿರಿ:** **1x3=3**

31. ಮಾರಿಗೌತಣವಾಯ್ತು ನಾಳಿನ ಭಾರತವು

**VIII. ಈ ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ:** **1x3=3**

32. ತಾಳಿದವನು ಬಾಳಿಯಾನು

**ಅಥವಾ**

ದೇಶ ಸುತ್ತಿ ನೋಡು; ಕೋಶ ಓದಿ ನೋಡು.

**IX. ಈ ಕೆಳಗಿನ ವಾಕ್ಯಗಳಿಗೆ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ:** **6x3=18**

33. "ಸಿಗುರು ತೆಗೆದ ಕಬ್ಬಿನಂತೆ, ಉಷ್ಣ ಅಳಿದ ಹಾಲಿನಂತೆ"
34. "ಹುಲಿ ಈಗ ಎಷ್ಟು ಹಸಿದಿರಬೇಕು"
35. "ಹಾಗಾದರೆ ಎಲ್ಲರಿಗೂ ಮನೆ ಆಗುವವರೆಗೆ ನನಗೂ ಮನೆ ಬೇಡ"
36. "ಪ್ರೀತಿಯ ಹಣತೆಯ ಹಚ್ಚೋಣ"
37. "ಸಾರ್ವಭೌಮರಾ ನೆತ್ತಿಯ ಕುಕ್ಕಿ"
38. "ನೆಲಕಿರಿವೆನೆಂದು ಬಗೆದಿರೆ ಚಲಕಿರಿವೆಂ"

**X. ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ:** **1x4=4**

16. ಕೊರಳಸೆರೆ ಹಿಗ್ಗಿದವು ದೃಗುಜಲ
____________________
____________________
____________________
____________________
ನರುಹಿ ಕೊಂದನು ಹಲವು ಮಾತೇನೆಂದು ಚಿಂತಿಸಿದ

**ಅಥವಾ**

ಮಾರಿಗೌತಣವಾಯ್ತು ನಾಳಿನ
____________________
____________________
____________________
____________________
ವೀರರೈವರ ನೋಯಿಸೆನು ರಾಜೀವಸಖನಾಣೆ

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶವನ್ನು ಬರೆಯಿರಿ:** **1x4=4**

39. ಬೆಳ್ಳಿಯ ಹಳ್ಳಿಯ ಮೇರೆಯ ಮೀರಿ
ತಿಂಗಳಿನೂರಿನ ನೀರನು ಹೀರಿ
ಆಡಲು ಹಾಡಲು ತಾ ಹಾರಾಡಲು
ಮಂಗಳಲೋಕದ ಅಂಗಳಕೇರಿ
ಹಕ್ಕಿ ಹಾರುತಿದೆ ನೋಡಿದಿರಾ?

**XII. ಈ ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ:** **2x4=8**

40. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಮೈಸೂರು 'ಮಾದರಿ ಮೈಸೂರು ರಾಜ್ಯ' ಹೇಗಾಯಿತು?

**ಅಥವಾ**

ವಿಶ್ವೇಶ್ವರಯ್ಯ ಅವರು ಮೈಸೂರು ದಿವಾನರಾಗಿ ಸಲ್ಲಿಸಿದ ಸೇವೆಯನ್ನು ಕುರಿತು ಬರೆಯಿರಿ:

41. ಭೀಷ್ಮ ಮತ್ತು ದುರ್ಯೋಧನರ ನಡುವಿನ ಸಂಭಾಷಣೆಯ ಸ್ವಾರಸ್ಯವನ್ನು ವಿವರಿಸಿ:

**ಅಥವಾ**

ದುರ್ಯೋಧನನ ಛಲದ ಗುಣ ಅವನ ಮಾತುಗಳಲ್ಲಿ ವ್ಯಕ್ತವಾಗಿರುವ ಬಗೆಯನ್ನು ವಿವರಿಸಿ:

**XIII. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ: 1x4=4(2+2)**

42. ಮಹಾತ್ಮ ಬಸವಣ್ಣನವರು ಕಟ್ಟಬಯಸಿದ್ದು ಸರ್ವಶೋಷಣೆಗಳಿಂದಲೂ ಮುಕ್ತವಾದ, ಸ್ವಾತಂತ್ರ್ಯ, ಸಮಾನತೆ, ಸೌಹಾರ್ದಗಳ ಅಡಿಗಲ್ಲಿನ ಮೇಲೆ ನಿಂತ, ಸರ್ವೋದಯ ನಿಷ್ಠವಾದ ಒಂದು ಆದರ್ಶ ಸಮಾಜವನ್ನು. ಅವರು ಕಲ್ಪಿಸಿಕೊಂಡು ಕಟ್ಟಬಯಸಿದ ನೂತನ ಸಮಾಜದ ಒಂದು ಮುಖ್ಯಾಧಾರವೆಂದರೆ ಕಾಯಕ ತತ್ತ್ವ. ಕಾಯಕಕ್ಕೆ ಬಸವಣ್ಣನವರಿತ್ತ ಪ್ರಾಧಾನ್ಯ ಅತ್ಯಂತ ಗಮನಾರ್ಹವಾದುದು. ಸಮಾಜದ ಪ್ರತಿಯೊಬ್ಬ ವ್ಯಕ್ತಿಯೂ ಏನಾದರೊಂದು ದೈಹಿಕವಾದ ಕೆಲಸ ಮಾಡಬೇಕು, ಅದರಿಂದಲೇ ಜೀವನ ನಡೆಸಬೇಕು ಎಂಬುದು ಈ ಕಾಯಕ ತತ್ತ್ವದ ಒಂದು ಮುಖವಾದರೆ, ಯಾವ ಕೆಲಸವೂ ಕೀಳಲ್ಲ ಪ್ರತಿಯೊಂದು ಕೆಲಸವೂ ಪವಿತ್ರ ಎನ್ನುವುದು ಇನ್ನೊಂದು ಮುಖ. ಅನೇಕ ಸಾಮಾಜಿಕ, ಆರ್ಥಿಕ ಸಮಸ್ಯೆಗಳಿಗೆ ರಾಮಬಾಣವಾಗಬಲ್ಲದು ಈ ಕಾಯಕ ತತ್ತ್ವ. ಸಮಾಜದ ಅಸಮತೆ, ದಾರಿದ್ರ್ಯಗಳನ್ನು ನಿವಾರಿಸುವ ಏಕೈಕ ಮಂತ್ರವಾಗಿದೆ 'ಕಾಯಕವೇ ಕೈಲಾಸ'. ಬಸವಣ್ಣನವರು ಸಂಸಾರ ತ್ಯಾಗವನ್ನು ವಿರೋಧಿಸುವುದಿಲ್ಲ. ಸಂಸಾರದಲ್ಲಿದ್ದುಕೊಂಡೇ ಪರಮಾರ್ಥವನ್ನು ಸಾಧಿಸುವ ಕಲೆಯನ್ನು ಅವರು ಉಪದೇಶಿಸಿದ್ದಾರೆ. ಅಂತರಂಗ–ಬಹಿರಂಗಗಳ ಸಾಮರಸ್ಯವನ್ನು ಅವರು ವಿಶೇಷವಾಗಿ ಒತ್ತಿ ಹೇಳಿದ್ದಾರೆ. ಒಳ್ಳೆಯ ಆಲೋಚನೆ, ಆಲೋಚನೆಗೆ ತಕ್ಕ ನುಡಿ, ನುಡಿಗೆ ತಕ್ಕ ನಡೆ ಇವುಗಳನ್ನು ಬೋಧಿಸಿದ್ದಾರೆ. 'ನುಡಿಗೆ ತಕ್ಕ ನಡೆಯ ಕಂಡರೆ ಕೂಡಲಸಂಗಮದೇವ ತನ್ನೊಳಗಿರ್ಪನಯ್ಯ' ಎಂಬುದು ಅವರ ಆಶ್ವಾಸನೆ. ಅಂತರಂಗದ ಅರಿವು, ಬಹಿರಂಗದ ಕ್ರಿಯೆ ಎರಡಕ್ಕೂ ಅವರು ಸಮಾನ ಪುರಸ್ಕಾರ ನೀಡಿದ್ದಾರೆ.

**ಪ್ರಶ್ನೆಗಳು:**

1. ಕಾಯಕತತ್ತ್ವದ ಎರಡು ಮುಖಗಳಾವುವು?
2. ಅಂತರಂಗ–ಬಹಿರಂಗಗಳ ಸಾಮರಸ್ಯದ ಕುರಿತು ಬಸವಣ್ಣನವರ ಬೋಧನೆಗಳೇನು?

**XIV. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ, ಪತ್ರವನ್ನು ಬರೆಯಿರಿ: 1x5=5**

43. ನಿಮ್ಮನ್ನು ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ದಾರದಹಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ 'ಅಲ್ಲಮ ಪ್ರಭು' ಎಂದು ಭಾವಿಸಿಕೊಂಡು, ನಿಮ್ಮ ಊರಿಗೆ ಸಮರ್ಪಕ ಸಾರಿಗೆ ವ್ಯವಸ್ಥೆಯನ್ನು ಮಾಡಿಕೊಡುವಂತೆ ಕೋರಿ, ನಿಮ್ಮ ಜಿಲ್ಲೆಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಮುಖ್ಯಾಧಿಕಾರಿಗಳಿಗೆ ಮನವಿ ಪತ್ರವನ್ನು ಬರೆಯಿರಿ:

**ಅಥವಾ**

ನಿಮ್ಮನ್ನು ಮಂಗಳೂರು ಜಿಲ್ಲೆಯ ಪುತ್ತೂರು ತಾಲೂಕು ಬಡಗಾನೂರಿನಲ್ಲಿರುವ ರಾಣಿ ಅಬ್ಬಕ್ಕದೇವಿ ವಸತಿ ಶಾಲೆಯ ವಿದ್ಯಾರ್ಥಿನಿ 'ಪರ್ಣವಿ' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ನಡೆಯುವ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ವಿನಂತಿಸಿ, ಉಡುಪಿ ಜಿಲ್ಲೆಯ ಕುಂದಾಪುರ ತಾಲೂಕಿನ ಕೋಟೇಶ್ವರ ಗ್ರಾಮದಲ್ಲಿ ವಾಸವಿರುವ 'ಹರಳಯ್ಯ' ಎಂಬ ಹೆಸರಿನ ತಂದೆ ಅವರಿಗೆ ಪತ್ರವನ್ನು ಬರೆಯಿರಿ:

**XV. ಕೆಳಗಿನ ಯಾವುದಾದರೂ ಒಂದು ವಿಷಯಕ್ಕೆ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ: 1x5=5**

44. ರಾಷ್ಟ್ರೀಯ ಭಾವೈಕ್ಯತೆ.

**ಅಥವಾ**

ಸಾಮಾಜಿಕ ಪಿಡುಗುಗಳು.

*****